# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ರಾಮನಗರ. ಮತ್ತು ಶ್ರೀ ಡಿ.ಎಂ. ಪ್ರಭುಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹಿರಿಯೂರು ಹಾಗೂ ಶ್ರೀ ಪ್ರಭಯ್ಯ ಕಾಶೀನಾಥಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸುರಪುರ ಇವರುಗಳ ಅಮಾನತ್ತು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 03 ಗ.ಕೋಶ, 2013 ದಿ. 19-05-2014.

2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 174 ಪಿಸೇಜಿ 2014, ದಿನಾಂಕ: 15.10.2014.

3) ಶ್ರೀ ಟಿ.ಹೆಚ್. ವೆಂಕಟೇಶ್, ಹಾಗೂ ಶ್ರೀ ಡಿ. ಎಂ. ಪ್ರಭುಸ್ವಾಮಿ, ಮತ್ತು ಶ್ರೀ ಪ್ರಭಯ್ಯ ಕಾಶೀನಾಥಯ್ಯ ಹಿರೇಮಠ ಇವರುಗಳ ಲಿಖಿತ ಹೇಳಿಕೆ ದಿನಾಂಕ: 10.04.2015, ಮತ್ತು 18.11.2014

ಪ್ರಸ್ತಾವನೆ:-

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ, ಆಡಳಿತಾತ್ಮಕ ಮಂಜೂರಾತಿ, ತಾಂತ್ರಿಕ ಮಂಜೂರಾತಿ, ಟೆಂಡರ್ ಪ್ರಕ್ರಿಯೆಯ ವಿವರಗಳು ಹಾಗೂ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಬಿಲ್ಲುಗಳ ಪಾವತಿ ವಿವರಗಳನ್ನು ಗಣಕೀಕರಣಗೊಳಿಸಲು ಸೂಚಿಸಲಾಗಿರುತ್ತದೆ. ಹಾಗೂ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಬಳಕೆಯನ್ನು ದಿ:02-04-2013 ರಿಂದ ಕಡ್ಡಾಯಗೊಳಿಸಿದೆ. ಮತ್ತು ದಿನಾಂಕ:03-10-2013 ರಿಂದ ತಂತ್ರಾಂಶದ ಹೊರಗಡೆ ಬಿಲ್ಲು ಪಾವತಿಸುವುದನ್ನು ನಿಷೇಧಿಸಲಾಗಿದೆ. ಆದಾಗ್ಯೂ ಈ ಯೋಜನೆಯನ್ನು ಕೆಲವೊಂದು ಜಿಲ್ಲೆಗಳಲ್ಲಿ ನಿರೀಕ್ಷಿತ ಮಟ್ಟದಲ್ಲಿ ಅನುಷ್ಠಾನಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನಲೆಯಲ್ಲಿ ಸದರಿ ತಂತ್ರಾಂಶವನ್ನು ಅನುಷ್ಠಾನಗೊಳಿಸದೆ ಕರ್ತವ್ಯ ಲೋಪವೆಸಗಿದ ಅಧಿಕಾರಿಗಳಿಗೆ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 19-05-2014 ರ ಕಾರಣ ಕೇಳುವ ನೋಟೀಸು ಜಾರಿಗೊಳಿಸಿ ಈ ಬಗ್ಗೆ 3 ದಿನಗಳ ಒಳಗಾಗಿ ಸಮಜಾಯಿಷಿ ನೀಡಲು ಸೂಚಿಸಲಾಗಿತ್ತು, ಆದರೆ ಸದರಿ ಅಧಿಕಾರಿಗಳು 4 ತಿಂಗಳ ಅವಧಿ ಗತಿಸಿದರೂ ಸಹ ಉತ್ತರವನ್ನು ಸಲ್ಲಿಸದೆ ಕರ್ತವ್ಯ ನಿರ್ಲಕ್ಷತೆ ಎಸಗಿದ ಇತರೆ ಅಧಿಕಾರಿಗಳ ಜೊತೆ ಈ ಕೆಳಕಂಡ ಅಧಿಕಾರಿಗಳನ್ನು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 15-10-2014 ರ ಆದೇಶದಲ್ಲಿ ಸೇವೆಯಿಂದ ಅಮಾನತ್ತುಪಡಿಸಿ ಆದೇಶಿಸಲಾಗಿತ್ತು.

1. ಶ್ರೀ ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ರಾಮನಗರ.
2. ಶ್ರೀ ಡಿ.ಎಂ. ಪ್ರಭುಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹಿರಿಯೂರು.
3. ಶ್ರೀ ಪ್ರಭಯ್ಯ ಕಾಶೀನಾಥಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸುರಪುರ

ಮೇಲೆ ಓದಲಾದ ಕ್ರಮ ಸಂಖ್ಯೆ(3) ರಲ್ಲಿ ಆಪಾದಿತ ಅಧಿಕಾರಿಗಳು ಲಿಖಿತ ಹೇಳಿಕೆಗಳನ್ನು ಸರ್ಕಾರಕ್ಕೆ ಸಲ್ಲಿಸಿ, ಎಲ್ಲಾ ಕಾಮಗಾರಿಗಳ ಬಿಲ್ಲುಗಳ ಪಾವತಿ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಲಾಗಿರುತ್ತದೆ, ಎಂದು ತಿಳಿಸುತ್ತಾ, ಅಮಾನತ್ತುಗೊಳಿಸಿ 6 ತಿಂಗಳು ಗತಿಸಿರುವುದರಿಂದ ಅಮಾನತ್ತು ಆದೇಶವನ್ನು ರದ್ದುಪಡಿಸಲು ಕೋರಿರುತ್ತಾರೆ.

ಆಪಾದಿತ ಅಧಿಕಾರಿಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಸದರಿ ಅಧಿಕಾರಿಗಳನ್ನು ಅಮಾನತ್ತುಗೊಳಿಸಿ ಈಗಾಗಲೇ 9 ತಿಂಗಳು ಕಳೆದಿರುವುದರಿಂದ ಸದರಿ ಅಧಿಕಾರಿಗಳ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಗ್ರಾಅಪ 236 ವಿಸೇಬಿ 2014, ಬೆಂಗಳೂರು, ದಿನಾಂಕ. 23.07.2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ಸರ್ಕಾರವು ಶ್ರೀ ಪ್ರಭಯ್ಯ ಕಾಶೀನಾಥಯ್ಯ ಹಿರೇಮಠ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸುರಪುರ ಇವರ ವಿರುದ್ಧದ ಇಲಾಖಾ ವಿಚಾರಣೆ ಕಾಯ್ದಿರಿಸಿ ಇವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಸಹಾಯಕ ಯೋಜನಾಧಿಕಾರಿ, ಡಿಆರ್‌ಡಿಎ ಕೋಶ, ಜಿಲ್ಲಾ ಪಂಚಾಯತಿ ಚಿತ್ರದುರ್ಗ, ಇಲ್ಲಿನ ಖಾಲಿ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಶ್ರೀ ಟಿ.ಹೆಚ್.ವೆಂಕಟೇಶ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ರಾಮನಗರ.ಮತ್ತು ಶ್ರೀ ಡಿ.ಎಂ. ಪ್ರಭುಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹಿರಿಯೂರು ಇವರುಗಳ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ, ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ, ಸೇವೆಗಳು-ಎ ಶಾಖೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು (ಲೆಕ್ಕಪತ್ರ 1 &2) / (ಆಡಿಟ್), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಚಿತ್ರದುರ್ಗ/ ಕಲಬುರ್ಗಿ/ ರಾಮನಗರ
3. ಸರ್ಕಾರದ ಅಧೀನ ಕಾರ್ಯದರ್ಶಿ, ಸೇವೆಗಳು-ಎ ಶಾಖೆ, ಗ್ರಾಅಪಂ. ರಾಜ್ ಇಲಾಖೆ.
4. ಸಂಬಂಧಿಸಿದ ಅಧಿಕಾರಿಗಳಿಗೆ – (ನೇರವಾಗಿ ಹಾಗೂ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರ ಮುಖಾಂತರ)
5. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
6. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ಜಂಟಿ ಕಾರ್ಯದರ್ಶಿ /. ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
7. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್.